RNU AIR DHARWAD

# APRIL 16,2025
# ALL INDIA RADIO- DHARWAD
# PRADESH SAMACHARA (KANNADA) 12PM

**ಸಮಾಜದ ಕಟ್ಟಕಡೆಯ ವ್ಯಕ್ತಿಯನ್ನು ಆರ್ಥಿಕ ಸಬಲರನ್ನಾಗಿ ಮಾಡಿ, ಸ್ವಾವಲಂಬಿ** ಹಾಗೂ ಸುಧಾರಿತ ಜೀವನ ನಡೆಸುವಂತೆ ಮಾಡುವುದು ಪಂಚ ಗ್ಯಾರಂಟಿ ಯೋಜನೆಗಳ ಉದ್ದೇಶವಾಗಿದೆ ಎಂದು ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪ್ರವಾಸೋದ್ಯಮ ಸಚಿವರಾದ ಎಚ್. ಕೆ.ಪಾಟೀಲ ಹೇಳಿದರು. ಗದಗ ಉಪ ವಿಭಾಗಾಧಿಕಾರಿ ಕಚೇರಿ ಆವರಣದಲ್ಲಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನು ಷ್ಠಾನ ಪ್ರಾಧಿಕಾರದ ನೂತನ ಕಚೇರಿ ಉದ್ಘಾಟಿಸಿ ಅವರು ಮಾತನಾಡಿದರು. ಗ್ಯಾರಂಟಿ ಯೋಜನೆಯ ಸೌಲಭ್ಯಗಳು ಬಡಜನರ ಬದುಕಿನಲ್ಲಿ ಸಂತಸ, ಸಮಾಧಾನ ತಂದಿದೆ. ಸಾಮಾಜಿಕ ಹಾಗೂ ಆರ್ಥಿಕ ಸಮಾನತೆಯನ್ನು ಹೊಂದುವುದು ಗ್ಯಾರಂಟಿ ಯೋಜನೆಯಿಂದ ಸಾಧ್ಯ ಎಂದರು.

<><><>

**ಹೊರರಾಜ್ಯಗಳಿಂದ ವಲಸೆ** ಬರುವ ಕಾರ್ಮಿಕರಿಂದ ಅಪರಾಧ ಸಂಖ್ಯೆ ಹೆಚ್ಚುತ್ತಿರುವ ಅಂಶವನ್ನು ಇಲಾಖೆ, ಗಂಭೀರವಾಗಿ ಪರಿಗಣಿಸಿದೆ ಹಾಗೂ ವಲಸೆ ಕಾರ್ಮಿಕರ ಮಾಹಿತಿಯನ್ನು ಸಂಘಟಿತ ಹಾಗೂ ಅಸಂಘಟಿತ ವಲಯಗಳ ಉದ್ಯೋಗದಾತರು ಸಂಗ್ರಹಿಸಬೇಕು ಎಂದು ರಾಜ್ಯ ಕಾರ್ಮಿಕ ಖಾತೆ ಸಚಿವ ಸಂತೋ ಷ್ ಲಾಡ್ ಹೇಳಿದರು. ಬೆಂಗಳೂರು ವಿಕಾಸಸೌಧದಲ್ಲಿ ಜರುಗಿದ ಕಾರ್ಮಿಕ ಸಂಘಟನೆಗಳ ಉನ್ನತ ಮಟ್ಟದ ಸಭೆಯಲ್ಲಿ ಪಾಲ್ಗೊಂಡ ಬಳಿಕ ಸುದ್ದಿಗೋಷ್ಠಿ ಉದ್ದೇಶಿಸಿ ಅವರು ಮಾತನಾಡಿದರು.

<><><>

**ವೃತ್ತಿಪರ ಶಿಕ್ಷಣ ಪ್ರವೇಶ ಪಡೆಯಲು,** ಸಾಮಾನ್ಯ ಪ್ರವೇಶ ಪರೀಕ್ಷೆ –ಸಿಇಟಿ, ಇಂದಿನಿಂದ ಆರಂಭಗೊಂಡಿದೆ. ಭೌತಶಾಸ್ತ್ರ ವಿಷಯದ ಪರೀಕ್ಷೆ ಈಗಷ್ಟೇ ಮುಕ್ತಾಯಗೊಂಡಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 22 ಸಾವಿರದ 525 ಅಭ್ಯರ್ಥಿಗಳು ಸಿಇಟಿಗೆ ನೋಂದಣಿ ಮಾಡಿಕೊಂಡಿದ್ದಾರೆ ಎಂದು ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ತಿಳಿಸಿದ್ದಾರೆ. ಜಿಲ್ಲೆಯಲ್ಲಿ ಒಟ್ಟು 43 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ಜರುಗುತ್ತಿವೆ. ಭದ್ರತೆಯ ದೃಷ್ಟಿಯಿಂದ ಪರೀಕ್ಷೆ ಕೊಠಡಿಗಳಲ್ಲಿ ಕ್ಯಾಮೆರಾ ಅಳವಡಿಸಲಾಗಿದ್ದು, ವೆಬ್ ಕಾಸ್ಟಿಂಗ್ ವ್ಯವಸ್ಥೆ ಕಲ್ಪಿಸಲಾಗಿದೆ.

<><><>

**ರಾಜ್ಯ ಕೌಶಲಾಭಿವೃದ್ಧಿ,** ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ವತಿಯಿಂದ ಕಲಬುರಗಿಯ, ಗುಲಬರ್ಗಾ ವಿಶ್ವವಿದ್ಯಾಲಯ ಆವರಣದಲ್ಲಿ ನಿರ್ಮಾಣಗೊಳ್ಳಲಿರುವ ತರಬೇತಿ ಕೇಂದ್ರದ ಶಂಕುಸ್ಥಾಪನೆ ಹಾಗೂ ಪ್ರಯೋಗಾಲಯದ ಉದ್ಘಾಟನಾ ಸಮಾರಂಭವು ನಗರದ ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆ ಆವರಣದಲ್ಲಿ ಪ್ರಗತಿಯಲ್ಲಿದೆ.

<><><>

**ಬೀದರ ಜಿಲ್ಲೆಯಲ್ಲಿ ಒಟ್ಟು** 2 ಸಾವಿರದ 25 ಕೋಟಿ ರೂಪಾಯಿ ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ಇಂದು ನೆರವೇರಲಿದೆ. ಸಂಜೆ 4 ಗಂಟೆಗೆ ನಗರದ ನೆಹರೂ ಕ್ರೀಡಾಂಗಣದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಪಾಲ್ಗೊಳ್ಳಲಿದ್ದಾರೆ. ಒಂದೂವರೆ ವರ್ಷಗಳ ಬಳಿಕ ಪುನರಾರಂಭಗೊಳ್ಳುತ್ತಿರುವ ಬೆಂಗಳೂರು–ಬೀದರ್ ನಾಗರಿಕ ವಿಮಾನ ಯಾನ ಸೇವೆ ಹಾಗೂ ಕಾರ್ಯಕ್ರಮದ ಸಿದ್ಧತೆಗಳನ್ನು ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಪರಿಶೀಲಿಸಿದರು.

<><><>

**ಧಾರವಾಡದ ಭಾರತೀಯ ಸಂಗೀತ ವಿದ್ಯಾಲಯ,** ಅಣ್ಣಾಜಿರಾವ್ ಸಿರೂರ ರಂಗಮಂದಿರ ಹಾಗೂ ಗಂಗೂಬಾಯಿ ಹಾನಗಲ್ ಸಂಗೀತ ವಿಶ್ವವಿದ್ಯಾಲಯ ಪ್ರತಿಷ್ಠಾನ ನೀಡುವ ಕೃಷ್ಣಾ ಹಾನಗಲ್ ರಾಷ್ಟ್ರೀಯ ಪ್ರಶಸ್ತಿಗೆ, ಪಂಡಿತ್ ಜಯತೀರ್ಥ ಮೇವುಂಡಿ ಆಯ್ಕೆಯಾಗಿದ್ದಾರೆ. ಪುರಸ್ಕಾರವು 40 ಸಾವಿರ ರೂಪಾಯಿ ನಗದು ಹಾಗೂ ಫಲಕ ಒಳಗೊಂಡಿದೆ.

<><><>

**ಬೀದರ ನಗರಸಭೆಯೊಂದಿಗೆ 6 ಗ್ರಾಮ** ಪಂಚಾಯಿತಿಗಳ 16 ಗ್ರಾಮಗಳನ್ನು ಸೇರಿಸಿ ಬೀದರ್ ಮಹಾನಗರ ಪಾಲಿಕೆ ಮಾಡಲು ಗೆಜೆಟೆಡ್ ಅಧಿಸೂಚನೆ ರಾಜ್ಯ ಸರ್ಕಾರ ಹೊರಡಿಸಿದೆ. ಈ ಬಗ್ಗೆ ಸಂತಸ ವ್ಯಕ್ತಪಡಿಸಿರುವ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹಾಗೂ ಪೌರಾಡಳಿತ ಖಾತೆ ಸಚಿವ ರಹೀಂ ಖಾನ್ ಸರ್ಕಾರಕ್ಕೆ ಧನ್ಯವಾದ ತಿಳಿಸಿದ್ದಾರೆ. ಐತಿಹಾಸಿಕ ನಿರ್ಧಾರದಿಂದ ಬೀದರ ನಗರಾಭಿವೃದ್ಧಿಗೆ ಹೆಚ್ಚಿನ ವೇಗ ದೊರೆಯಲಿದೆ ಎಂದು ಸಂಸದ ಸಾಗರ ಖಂಡ್ರೆ ಹೇಳಿದರು.

<><><>

**ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಂಡೋಸಲ್ಫಾನ್** ಸಂತ್ರಸ್ತರಿಗೆ, ಇಂದಿನಿಂದ 19 ರವರೆಗೆ ವಿಶೇ ’ ಆರೋಗ್ಯ ತಪಾಸಣಾ ಶಿಬಿರಗಳು ನಡೆಯಲಿವೆ. ಇಂದು ಬೆಳ್ತಂಗಡಿ ತಾಲೂಕಿನ ಕೊಕ್ಕಡ ಹಾಗೂ 19 ರಂದು ಪುತ್ತೂರು ತಾಲೂಕಿನ ಪಾಣಾಜೆ ಆರೋಗ್ಯ ಕೇಂದ್ರಗಳಲ್ಲಿ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿದೆ. ಇದರ ಪ್ರಯೋಜನ ಪಡೆಯುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><>

**ಬಾಲ ಹಾಗೂ ಕಿಶೋರ ಕಾರ್ಮಿಕರು** ಕಂಡುಬಂದಲ್ಲಿ, ಮಕ್ಕಳ ಉಚಿತ ಸಹಾಯವಾಣಿ ಸಂಖ್ಯೆ 1098 ಕ್ಕೆ ಕರೆ ಮಾಡಿ, ಮಾಹಿತಿ ನೀಡುವಂತೆ, ಉತ್ತರಕನ್ನಡ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ಕೋರಿದ್ದಾರೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>